**MAY 20, 2025**

**AKASHAVANI - DHARWAD**

**PRADESH SAAMACHARA (KANNADA) 12 P.M**

**ಎರಡು ವರ್ಷಗಳ ಕಾಲ ಸರ್ಕಾರದ** ಸಾಧನೆಯನ್ನು ಜನರಿಗೆ ಸಮರ್ಪಿಸುವುದರ ಜೊತೆಗೆ ಉಳಿದ ಅವಧಿಯಲ್ಲಿ ಹೊಸ ಯೋಜನೆಗಳಿಗೆ ಸಂಕಲ್ಪ ತೊಡುವ ಈ ಕಾರ್ಯಕ್ರಮವೇ ಇಂದಿನ ಸಮರ್ಪಣೆ ಸಂಕಲ್ಪ ಸಮಾವೇಶ ಎಂದು ಕಂದಾಯ ಖಾತೆ ಸಚಿವ ಕೃಷ್ಣಭೈರೇಗೌಡ ಹೇಳಿದ್ದಾರೆ. ವಿಜಯನಗರದಲ್ಲಿ ಇಂದು ಆಯೋಜಿಸಲಾಗಿದ್ದ ಸಮರ್ಪಣೆ ಸಂಕಲ್ಪ ಸಮಾವೇಶದದಲ್ಲಿ ಸರ್ವರನ್ನು ಸ್ವಾಗತಿಸಿ, ಜನರ ಸೇವೆಗೆ ತಮ್ಮ ಸರ್ಕಾರ ಸದಾ ಸಿದ್ಧವಾಗಿದೆ ಎಂದು ಪ್ರಾಸ್ತಾವಿಕ ನುಡಿಗಳನ್ನಾಡಿದರು.

<><><>

**ಅಪರಾಧಿಗಳ ವಿರುದ್ಧ ಕಠಿಣ ಕ್ರಮ ಜರುಗಿ**ಸುವ ಮೂಲಕ ಪೊಲೀಸ್ ಇಲಾಖೆ ಕಾನೂನು ಸುವ್ಯವಸ್ಥೆ ಕಾಪಾಡಲು ಮುಂದಾಗಬೇಕು ಎಂದು ಅರಣ್ಯ ಪರಿಸರ ಹಾಗೂ ಜೈವಿಕ ಖಾತೆ ಸಚಿವ ಈಶ್ವರ ಬಿ.ಖಂಡ್ರೆ ಹೇಳಿದ್ದಾರೆ. ಬೀದರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಅಪರಾಧ ತಡೆಗೆ ಪೊಲೀಸ್ ಇಲಾಖೆಗೆ ಎಲ್ಲಾ ರೀತಿಯ ಸಹಕಾರ ನೀಡಲಾಗುವುದು. ಕಾನೂನು ಸುವ್ಯವಸ್ಥೆ ಸಮರ್ಪಕವಾಗಿದ್ದರೆ ಮಾತ್ರ ಜನರು ನೆಮ್ಮದಿಯಿಂದ ಜೀವನ ಸಾಗಿಸಲು ಸಾಧ್ಯ ಎಂದರು.

<><><>

**ಬೆಂಗಳೂರು ವಿಶ್ವವಿದ್ಯಾಲಯದ**ಜ್ಞಾನಭಾರತಿ ಆವರಣದ, 'ಬಯೋ ಪಾರ್ಕ್'ನ್ನು, ಪಾರಂಪರಿಕ ತಾಣವೆಂದು ಘೋಷಿಸಲು ಅರಣ್ಯ ಖಾತೆ ಸಚಿವ ಈಶ್ವರ್ ಖಂಡ್ರೆ ಪ್ರಸ್ತಾವ ಮಂಡಿಸಲು ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಚಿಸಿದ್ದಾರೆ. ಭೂ ವಿಜ್ಞಾನ ವಿಭಾಗದ ನಿವೃತ್ತ ಪ್ರಾಧ್ಯಾಪಕ ಟಿ.ಜೆ.ರೇಣುಕಾಪ್ರಸಾದ್ ಸಚಿವರ ನಿರ್ಧಾರವನ್ನು ಸ್ವಾಗತಿಸಿ ಬಯೋ ಪಾರ್ಕ್ ಸಂರಕ್ಷಣೆ ಮೂಲಕ ಜೀವ ವೈವಿಧ್ಯ ಉಳಿವಿಗೆ ಮಹತ್ವದ ಆಸರೆ ನೆಲೆ ದೊರಕಲಿದೆ. ಬೆಂಗಳೂರಿಗರ ಆರೋಗ್ಯ ಮತ್ತು ಪರಿಸರ ರಕ್ಷಣೆಯ ಮಹತ್ವದ ಹೆಜ್ಜೆಯಾಗಿದೆ ಎಂದು ಅವರು, ತಿಳಿಸಿದ್ದಾರೆ.

<><><>

**ಬೀದರ್ ಜಿಲ್ಲೆಯ ಜನರಿಗೆ** ಯಾವುದೇ ರೀತಿಯಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ಕ್ರಮವಹಿಸಬೇಕು ಎಂದು ಸಚಿವ ಈಶ್ವರ. ಬಿ. ಖಂಡ್ರೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬೀದರ್ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಕುಡಿಯುವ ನೀರಿನ ಸಮಸ್ಯೆ ಹಾಗೂ ಮಳೆ ಹಾನಿಯ ಕುರಿತು ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಟೆಂಡರ್ ಇಲ್ಲದೇ ಕಾಮಗಾರಿ ಕೈಗೊಳ್ಳುತ್ತಿರುವ ಕುರಿತು ಮಾಧ್ಯಮಗಳಲ್ಲಿ ವರದಿಯಾಗುತ್ತಿವೆ ಇದನ್ನು ಗಂಭೀರವಾಗಿ ಪರಿಗಣಿಸಿ, ಟೆಂಡರ್ ಇಲ್ಲದೇ ಯಾರಿಗೂ ಕಾಮಗಾರಿ ಕೈಗೊಳ್ಳಲು ಅವಕಾಶ ನೀಡಬಾರದು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

<><><>

**ನಾಳೆ 21 ರಂದು,** ಕರ್ನಾಟಕದ ಆರು ಪಳಗಿಸಿದ ಆನೆಗಳನ್ನು, ಆಂಧ್ರ ಪ್ರದೇಶಕ್ಕೆ, ಮಾನವ ಮತ್ತು ಕಾಡಾನೆ ಸಂಘರ್ಷ ತಗ್ಗಿಸಲು, ಉಡುಗೊರೆಯಾಗಿ ನೀಡಲು, ರಾಜ್ಯ ಸರ್ಕಾರ ನಿರ್ಧರಿಸಿದೆ. ಕೊಡಗು ಜಿಲ್ಲೆ, ದುಬಾರೆ ಆನೆ ಶಿಬಿರದಿಂದ, ರಂಜನ್, ದೇವ, ಮಾಸ್ತಿ, ಕರುನಾಡು ಮತ್ತು ಶಿವಮೊಗ್ಗ ಜಿಲ್ಲೆ ಸಕ್ರೆಬೈಲು ಶಿಬಿರದಿಂದ ಕೃಷ್ಣ ಹಾಗೂ ಅಭಿಮನ್ಯು ಹೆಸರಿನ ಆನೆಗಳನ್ನು ಚಿತ್ತೂರಿಗೆ ಕಳುಹಿಸಲು ಸಿದ್ಧತೆ ನಡೆದಿದೆ. ಹಾಸನ, ಕೊಡಗು, ಚಾಮರಾಜನಗರ ಹಾಗೂ ಮೈಸೂರು ಜಿಲ್ಲೆಗಳಲ್ಲಿ, ಮಾನವ ವನ್ಯಪ್ರಾಣಿ ಸಂಘರ್ಷ ಹೆಚ್ಚುತ್ತಿದ್ದು ಪರಿಸರವಾದಿಗಳು ಪಳಗಿಸಿದ ಆನೆಗಳನ್ನು ರಾಜ್ಯದ ಸಮಸ್ಯೆ ಪರಿಹರಿಸಲು ಬಳಸಿಕೊಳ್ಳುವಂತೆ ಒತ್ತಾಯಿಸಿದ್ದಾಗಿ ಸುದ್ದಿ ಸಂಸ್ಥೆ ವರದಿ ಮಾಡಿದೆ.

<><><>

**'ನನ್ನ ಭಾರತ, ನಾಗರಿಕ ರಕ್ಷಣಾ ಸ್ವಯಂಸೇವಕ'**ರಾಗಿ ಸೇವೆ ಸಲ್ಲಿಸಲು, ಭಾರತ ಸರ್ಕಾರದ ಯುವ ವ್ಯವಹಾರ ಮತ್ತು ಕ್ರೀಡಾ ಇಲಾಖೆಯಿಂದ, ಯುವಜನತೆಗೆ ಕರೆ ನೀಡಲಾಗಿದೆ. ತುರ್ತು ಪರಿಸ್ಥಿತಿ ಹಾಗೂ ಬಿಕ್ಕಟ್ಟಿನ ಸಮಯದಲ್ಲಿ, ಯುವಜನತೆ ದೇಶಕ್ಕೆ ತಮ್ಮ ಕೊಡುಗೆ ನೀಡಲು ಇದು ಸದವಕಾಶವಾಗಿದೆ. **my bharat.gov.in** ಜಾಲತಾಣದ ಮೂಲಕ, ಹೆಸರು ನೊಂದಾಯಿಸಬಹುದು.

<><><>

**2024–25ನೇ ಸಾಲಿನ** ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ. ಗುಣಮಟ್ಟದ ಸೂರ್ಯಕಾಂತಿ ಖರೀದಿಸಲು ಕಲಬುರಗಿ ಜಿಲ್ಲೆಯಲ್ಲಿ ಪ್ರತಿ ತಾಲ್ಲೂಕಿಗೆ 1 ಖರೀದಿ ಕೇಂದ್ರದಂತೆ ಜಿಲ್ಲೆಯಲ್ಲಿ ಒಟ್ಟು 11 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು ಖರೀದಿ ಕೇಂದ್ರಗಳಾಗಿ ಗುರುತಿಸಲಾಗಿದೆ. ರೈತರು ತಮ್ಮ ಸಮೀಪದ ಖರೀದಿ ಕೇಂದ್ರಕ್ಕೆ ಭೇಟಿ ನೀಡಿ ತಾವು ಬೆಳೆದ ಸೂರ್ಯಕಾಂತಿ ಮಾರಾಟಕ್ಕೆ ನೊಂದಾಯಿಸಿಕೊಂಡು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ತಿಳಿಸಿದ್ದಾರೆ.

ಗುಣಮಟ್ಟದ ಸೂರ್ಯಕಾಂತಿ ಪ್ರತಿ ಎಕರೆಗೆ 4 ಕ್ವಿಂಟಾಲ್‌ನಂತೆ ಹಾಗೂ ಪ್ರತಿ ರೈತರಿಂದ ಗರಿಷ್ಠ 20 ಕ್ವಿಂಟಾಲ್‌ವರೆಗೆ ಖರೀದಿಸಲು ಬೆಂಬಲ ಬೆಲೆ 7 ಸಾವಿರದ 280 ರೂಪಾಯಿ ನಿಗದಿಪಡಿಸಲಾಗಿದೆ. ಮಾರಾಟದ ಮೊತ್ತವನ್ನು ಡಿ.ಬಿ.ಟಿ. ಮೂಲಕ ರೈತರ ಬ್ಯಾಂಕ ಖಾತೆಗೆ

ಜಮಾ ಮಾಡಲಾಗುತ್ತದೆ. ತಕ್ಷಣದಿಂದ ಜಾರಿಗೆ ಬರುವಂತೆ ರೈತರ ನೊಂದಣಿ ಕಾರ್ಯವನ್ನು ಸರ್ಕಾರದ ಆದೇಶದ ದಿನಾಂಕದಿಂದ 80 ದಿನಗಳವರೆಗೆ ಹಾಗೂ ಖರೀದಿ ಪ್ರಕ್ರಿಯೆ ಸರ್ಕಾರದ ಆದೇಶದ ದಿನಾಂಕದಿಂದ 90 ದಿನಗಳವರೆಗೆ ಜರುಗಲಿದೆ.

<><><>

**ಧಾರವಾಡದ ಅಭಿನಯ ಭಾರತಿ,** ಕುರ್ತಕೋಟಿ ಮೆಮೋರಿಯಲ್ ಟ್ರಸ್ಟ್, ಸಕ್ಕರಿ ಬಾಳಾಚರ್ಯ ಶಾಂತ ಕವಿಗಳ ಟ್ರಸ್ಟ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಇತ್ತೀಚೆಗೆ ನಿಧನರಾದ ಧಾರವಾಡದ ಮನೋಹರ ಗ್ರಂಥಮಾಲೆಯ ವ್ಯವಸ್ಥಾಪಕ, ಸಂಪಾದಕರಾಗಿದ್ದ ಡಾಕ್ಟರ್ ರಮಾಕಾಂತ ಜೋಶಿ ಅವರಿಗೆ ನುಡಿ ನಮನ ಕಾರ್ಯಕ್ರಮ ಆಯೋಜಿಸಲಾಗಿದೆ. ಇಂದು ಸಂಜೆ ಧಾರವಾಡ ರಂಗಾಯಣದ ಸಾಂಸ್ಕೃತಿಕ ಸಮುಚ್ಚಯದಲ್ಲಿ ನಡೆಯುವ ಕಾರ್ಯಕ್ರಮವನ್ನು ಡಾಕ್ಟರ ಕೃಷ್ಣ ಕಟ್ಟಿ ಹಾಗೂ ಡಾಕ್ಟರ್ ಶಶಿಧರ ನರೇಂದ್ರ ನಡೆಸಿ ಕೊಡಲಿದ್ದಾರೆ.

<><><>

**ರಾಷ್ಟ್ರೀಯ ಖಾದ್ಯ ತೈ**ಲ ಅಭಿಯಾನದಡಿಧಾರವಾಡತೋಟಗಾರಿಕೆ ಇಲಾಖೆ ಆಸಕ್ತ ರೈತರಿಂದ ಅರ್ಜಿ ಆಹ್ವಾನಿಸಿದೆ.

<><><>

**ಹುಬ್ಬಳ್ಳಿ ವಿಮಾನ ನಿಲ್ದಾಣದಲ್ಲಿ**'ಆಪರೇಷನ್ ಅಭ್ಯಾಸ್' ಅಣಕು ಕಾರ್ಯಾಚರಣೆ ವಿವಿಧ ಇಲಾಖೆಗಳ ಸಹಭಾಗಿತ್ವದಲ್ಲಿ ನಡೆಯಿತು.

<><><>